# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 557 |
| ಸದಸ್ಯರ ಹೆಸರು | ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | 08/12/2023 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ರಸಗೊಬ್ಬರ ಕಳ್ಳ ಸಾಗಾಣಿಕೆ ಹಾಗೂ ಕಾಳಸಂತೆಯಲ್ಲಿ ಅಕ್ರಮವಾಗಿ ಮಾರಾಟ ಮಾಡುತ್ತಿರುವುದರಿಂದ ರೈತರಿಗೆ ಸಕಾಲದಲ್ಲಿ ರಸಗೊಬ್ಬರ ದೊರೆಯದೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯಕ್ಕೆ ಪ್ರಸಕ್ತ ಸಾಲಿನಲ್ಲಿ ಬೇಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ರಸಗೊಬ್ಬರ ಸರಬರಾಜಾಗಿದ್ದು ಯಾವುದೇ ಕೊರತೆ ಕಂಡು ಬಂದಿರುವುದಿಲ್ಲ ಹಾಗೂ ಸಕಾಲದಲ್ಲಿ ರೈತರಿಗೆ ರಸಗೊಬ್ಬರ ದೊರಕುತ್ತಿದೆ.<br>ಕಳ್ಳಸಾಗಾಣಿಕೆ ಹಾಗೂ ಕಾಳಸಂತೆಯಲ್ಲಿ ಅಕ್ರಮವಾಗಿ ಮಾರಾಟ ಮಾಡಿರುವ ಕೆಲವು ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿರುತ್ತವೆ. |
| ಆ) | ಬಂದಿದ್ದಲ್ಲಿ, ರಾಜ್ಯದಲ್ಲಿ ರೈತರಿಗೆ ಕೊಡುವ ಸಬ್ಸಿಡಿಯ ಯೂರಿಯಾ ಸೇರಿ ಇನ್ನಿತರ ರಸಗೊಬ್ಬರವನ್ನು ಕೈಗಾರಿಕಾ ಉದ್ದೇಶಕ್ಕಾಗಿ ದೊಡ್ಡ ಖಾಸಗಿ ಸಂಸ್ಥೆಗಳು ಅಕ್ರಮವಾಗಿ ಖರೀದಿಸಿ ಬಳಸುತ್ತಿದ್ದು, ಸದರಿ ಅಕ್ರಮ ದಂಧೆಯಲ್ಲಿ ಗೊಬ್ಬರ ತಯಾರಿಕಾ ಘಟಕಗಳೇ ಭಾಗಿಯಾಗಿರುವ ಪ್ರಕರಣಗಳಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; | ರಾಜ್ಯದ ಜಿಲ್ಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಜಂಟಿ ಕೃಷಿ ನಿರ್ದೇಶಕರು, ಉಪ ಕೃಷಿ ನಿರ್ದೇಶಕರು, ಸಹಾಯಕ ಕೃಷಿ ನಿರ್ದೇಶಕರು, ಕೃಷಿ ಅಧಿಕಾರಿಗಳು ಮತ್ತು ಕೃಷಿ ಪದವಿಯನ್ನು ಹೊಂದಿರುವ ಸಹಾಯಕ ಕೃಷಿ ಅಧಿಕಾರಿಗಳನ್ನು ರಸಗೊಬ್ಬರ (ನಿಯಂತ್ರಣ) ಆದೇಶ, 1985 ಕ್ಲಾಸ್ 28 ರಡಿ ರಸಗೊಬ್ಬರ ಪರಿವೀಕ್ಷಕರನ್ನಾಗಿ ಅಧಿಸೂಚಿಸಲಾಗಿರುತ್ತದೆ. ರಸಗೊಬ್ಬರ ಪರಿವೀಕ್ಷಕರು ಆಗಿಂದಾಗ್ಯೆ ಅನಿರೀಕ್ಷಿತವಾಗಿ ದೂರುಗಳನ್ನು ಆಧರಿಸಿ ಅವರ ವ್ಯಾಪ್ತಿಯಲ್ಲಿ ರಸಗೊಬ್ಬರ ಮಾರಾಟ ಮಳಿಗೆ/ಉತ್ಪಾದನಾ ಘಟಕಗಳಿಗೆ ಭೇಟಿ ನೀಡಿ ಪರಿಶೀಲಿಸಿ ಉಲ್ಲಂಘನೆ ಸಂಬಂಧ ಕ್ರಮ ಜರುಗಿಸುತ್ತಿದ್ದಾರೆ.<br>ರಸಗೊಬ್ಬರ (ನಿಯಂತ್ರಣ) ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955ರ ಉಲ್ಲಂಘನೆಗಳಿಗೆ ಸಂಬಂಧಿಸಿದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ರಾಜ್ಯದಲ್ಲಿ ಅಪರ ಕೃಷಿ ನಿರ್ದೇಶಕರ ನೇತೃತ್ವದಲ್ಲಿ ಜಾಗೃತ ಕೋಶ ಸೃಜಿಸಲಾಗಿದೆ ಮತ್ತು ಇವರ ಅಧೀನದಲ್ಲಿ ರಾಜ್ಯದಲ್ಲಿ4 ವಿಭಾಗಗಳಲ್ಲಿ (ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ) ಜಂಟಿ ಕೃಷಿ ನಿರ್ದೇಶಕರು (ಜಾಗೃತ ಕೋಶ) ಕಾರ್ಯ ನಿರ್ವಹಿಸುತ್ತಿದ್ದಾರೆ. ಜಾಗೃತ ಕೋಶದ ಅಧಿಕಾರಿಗಳು, ಜಂಟಿ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಹಾಯಕ ಕೃಷಿ ನಿರ್ದೇಶಕರು (ಜಾರಿದಳ) ದೂರುಗಳನ್ನು ಆಧರಿಸಿ ಅನಿರೀಕ್ಷಿತವಾಗಿ ಅವರ ವ್ಯಾಪ್ತಿಯಲ್ಲಿನ ರಸಗೊಬ್ಬರ ಮಾರಾಟ ಮಳಿಗೆ/ಉತ್ಪಾದನಾ ಘಟಕಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲನೆಯನ್ನು ಕೈಗೊಂಡು ರಸಗೊಬ್ಬರ (ನಿಯಂತ್ರಣ) ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955ರ ಉಲ್ಲಂಘನೆ ಕಂಡುಬಂದಲ್ಲಿ ಸೂಕ್ತ ಕ್ರಮ ಕೈಗೊಳ್ಳುತ್ತಿದ್ದಾರೆ. |

ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ಕೃಷಿಯೇತರ ಚಟುವಟಿಕೆಗಳಿಗೆ ಯೂರಿಯಾ ಬಳಸುತ್ತಿರುವ ಕೈಗಾರಿಕೆಗಳನ್ನು ಗುರುತಿಸಿ, ಜಿಲ್ಲಾಡಳಿತ, ಪೋಲಿಸ್ ಇಲಾಖೆ, ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಕೃಷಿ ಇಲಾಖೆ ಮತ್ತು ಇತರೆ ಇಲಾಖೆಗಳನ್ನು ಒಳಗೊಂಡ ತಂಡವನ್ನು ರಚಿಸಲಾಗಿದ್ದು ಸದರಿ ತಂಡವು ಈ ಸಂಬಂಧ ರಸಗೊಬ್ಬರ (ನಿಯಂತ್ರಣ) ಆದೇಶ, 1985 ಹಾಗೂ ಅಗತ್ಯ ವಸ್ತುಗಳ ಕಾಯ್ದೆ, 1955 ರ ರನ್ವಯ ಸೂಕ್ತ ಕ್ರಮ ವಹಿಸುತ್ತಿದ್ದಾರೆ.

ಮುಂದುವರೆದು, ರಾಜ್ಯದ ಗಡಿ ಹೊಂದಿರುವ ಜಿಲ್ಲೆಗಳ ಚೆಕ್ ಪೋಸ್ಟ್ ಗಳಲ್ಲಿ ಅನಧಿಕೃತವಾಗಿ/ಅಕ್ರಮವಾಗಿ ಯೂರಿಯಾ ಹಾಗೂ ಇನ್ನಿತರೆ ರಸಗೊಬ್ಬರಗಳ ಸಾಗಾಣಿಕೆಯ ಬಗ್ಗೆ ಕೃಷಿ ಇಲಾಖೆ ಮತ್ತು ಹತ್ತಿರದ ಪೋಲಿಸ್ ಠಾಣೆಗೆ ಮಾಹಿತಿ ನೀಡಲು ಸಂಬಂಧಪಟ್ಟ ಇಲಾಖೆಗಳಿಗೆ ಜಿಲ್ಲಾಧಿಕಾರಿಗಳ ಮೂಲಕ ನಿರ್ದೇಶನ ನೀಡಿ ಕಟ್ಟು ನಿಟ್ಟಿನ ಕ್ರಮ ವಹಿಸಲಾಗುತ್ತಿದೆ.

ಪ್ರಸಕ್ತ ಸಾಲಿನಲ್ಲಿ(ನವೆಂಬರ್ 2023 ಮಾಹೆಯ ಅಂತ್ಯಕ್ಕೆ) ಕೃಷಿಗೆ ಬಳಸುವ ಸಬ್ಸಿಡಿ ಯೂರಿಯಾ ರಸಗೊಬ್ಬರವನ್ನು ಕೈಗಾರಿಕಾ ಉದ್ದೇಶಕ್ಕಾಗಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿದ್ದ ಸಂಬಂಧ ತಪ್ಪಿತಸ್ಥರ ವಿರುದ್ಧ 3 ಎಫ್.ಐ.ಆರ್ ಗಳನ್ನು ಆಯಾ ವ್ಯಾಪ್ತಿಯ ಪೋಲಿಸ್ ಠಾಣೆಯಲ್ಲಿ ದಾಖಲಿಸಿದ್ದು, ವಿವರ ಕೆಳಕಂಡಂತ್ತಿದೆ.

| **ಕ್ರ. ಸಂ** | **ಜಿಲ್ಲೆ** | **ಪೋಲೀಸ್ ಠಾಣೆ** | **ಅಪರಾಧ ಸಂಖ್ಯೆ** |
|---|---|---|---|
| 1 | ಚಿಕ್ಕಮಗಳೂರು | ಸಖರಾಯಪಟ್ಟಣ | ಎಫ್.ಐ.ಆರ್ ಸಂಖ್ಯೆ: 0075/2023 |
| 2 | ಚಿಕ್ಕಮಗಳೂರು | ಲಿಂಗದಹಳ್ಳಿ | ಎಫ್.ಐ.ಆರ್ ಸಂಖ್ಯೆ: 0089/2023 |
| 3 | ದಾವಣಗೆರೆ | ಬಸವಪಟ್ಟಣ | ಎಫ್.ಐ.ಆರ್ ಸಂಖ್ಯೆ: 0131/2023 |

ಕಲಬೆರಕೆ/ನಕಲಿ ರಸಗೊಬ್ಬರಗಳನ್ನು ಮಾರಾಟ ಮಾಡುತ್ತಿದ್ದ ಹಾಗೂ ಅದರಲ್ಲಿ ಭಾಗಿಯಾದ ವ್ಯಕ್ತಿಗಳನ್ನು ಗುರುತಿಸಿ ಪೊಲೀಸ್ ಠಾಣೆಗಳಲ್ಲಿ ಎಫ್.ಐ.ಆರ್ ಗಳನ್ನು ದಾಖಲಿಸಲಾಗಿದೆ. ದಾಖಲಿಸಿರುವ ಕೆಲವು ಪ್ರಕರಣಗಳು ಅಂತರ ರಾಜ್ಯ ವ್ಯಾಪ್ತಿಗೆ ಒಳಪಡುವುದರಿಂದ ಹಾಗೂ ಹೆಚ್ಚಿನ ಮಾಹಿತಿಯನ್ನು ಸಂಗ್ರಹಿಸುವ ಅವಶ್ಯಕತೆ ಇದ್ದುದರಿಂದ 9 ಪ್ರಕರಣಗಳನ್ನು ಸರ್ಕಾರದ ಆದೇಶ ಸಂ:ಹೆಚ್.ಡಿ/58/ಸಿ.ಒ.ಡಿ/2022, ಬೆಂಗಳೂರು ದಿನಾಂಕ:18.01.2023 ರನ್ವಯ ಸಿ.ಐ.ಡಿ. ತನಿಖೆಗೆ ವಹಿಸಲಾಗಿರುತ್ತದೆ ವಿವರ ಕೆಳಕಂಡಂತಿರುತ್ತದೆ.

| **ಕ್ರ. ಸಂ** | **ಜಿಲ್ಲೆ** | **ಪೋಲೀಸ್ ಠಾಣೆ** | **ಅಪರಾಧ ಸಂಖ್ಯೆ** |
|---|---|---|---|
| 1 | ಚಿತ್ರದುರ್ಗ | ಹೊಳಲ್ಕೆರೆ | 0257/2022 |
| 2 | ಕೋಲಾರ | ಮುಳುಬಾಗಿಲು ಟೌನ್ | 0078/2022 |
| 3 | ಮಂಡ್ಯ | ಕಿರುಗಾವಲು | 0014/2022 |
| 4 | ಮಂಡ್ಯ | ಹಲಗೂರು | 0028/2022 |
| 5 | ಗದಗ | ರೋಣ | 0167/2022 |
| 6 | ಚಿತ್ರದುರ್ಗ | ಚಿತ್ರದುರ್ಗ ಟೌನ್ | 0161/2022 |

<table>
<tr><td></td><td></td><td><table><tr><td>7</td><td>ಚಿತ್ರದುರ್ಗ</td><td>ಭರಮಸಾಗರ</td><td>0221/2022</td></tr><tr><td>8</td><td>ವಿಜಯನಗರ</td><td>ಹಡಗಲಿ</td><td>0111/2022</td></tr><tr><td>9</td><td>ಯಾದಗಿರಿ</td><td>ವಡಗೇರಾ</td><td>0063/2022</td></tr></table></td></tr>
<tr><td>ಇ)</td><td>ಹಲವಾರು ಡೀಲರ್ ಗಳು ಹಾಗೂ ಚಿಲ್ಲರೆ ವ್ಯಾಪಾರಿಗಳು ಅಕ್ರಮವಾಗಿ ಗೊಬ್ಬರ ದಾಸ್ತಾನು ಮಾಡಿಟ್ಟು ಕೃತಕ ಅಭಾವ ಸೃಷ್ಟಿಸುವುದು, ಮಧ್ಯವರ್ತಿಗಳ ಜತೆ ಕೈಜೋಡಿಸಿ ಕಳ್ಳದಾರಿಯಲ್ಲಿ ಮಾರಾಟ ಮಾಡುವುದು; ಗೊಬ್ಬರ ಖಾಲಿ ಎಂದು ಸರ್ಕಾರಕ್ಕೆ ಲೆಕ್ಕ ತೋರಿಸಿ ಅಕ್ರಮ ದಾಸ್ತಾನು ಮಾಡಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವವರ ವಿರುದ್ಧ ಸರ್ಕಾರ ಏನು ಕ್ರಮವಹಿಸಿದೆ;</td><td>ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಪ್ರತಿ ಹಂಗಾಮು ಪೂರ್ವದಲ್ಲಿಯೇ ಎಲ್ಲಾ ರಸಗೊಬ್ಬರ ಮಾರಾಟಗಾರರಿಗೆ ಸಭೆಗಳನ್ನು ಆಯೋಜಿಸಿ, ರೈತರಿಗೆ ರಸಗೊಬ್ಬರಗಳನ್ನು ಕಡ್ಡಾಯವಾಗಿ ಪಾಯಿಂಟ್ ಆಫ್ ಸೇಲ್ ಉಪಕರಣದ(PoS) ಮುಖಾಂತವೇ ಎಮ್.ಆರ್.ಪಿ ದರದಲ್ಲಿಯೇ ವಿತರಿಸಲು ನಿರ್ದೇಶಿಸಲಾಗಿರುತ್ತದೆ.<br><br>ಎಲ್ಲಾ ರಸಗೊಬ್ಬರ ಮಾರಾಟ ಮಳಿಗೆಗಳ ಮುಂದೆ ಸಾರ್ವಜನಿಕರಿಗೆ ಕಾಣುವಂತೆ ವಿವಿಧ ಶ್ರೇಣಿಗಳ ರಸಗೊಬ್ಬರಗಳ ದಾಸ್ತಾನು ಮತ್ತು ಗರಿಷ್ಟ ಮಾರಾಟ ಬೆಲೆಯನ್ನು ಪ್ರದರ್ಶಿಸಲು ಕ್ರಮ ವಹಿಸಲಾಗಿದೆ.<br><br>ಮುಂದುವರೆದು, ರಾಜ್ಯದಲ್ಲಿ ಎಮ್.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ರಸಗೊಬ್ಬರಗಳು ವಿತರಣೆಯಾಗುತ್ತಿರುವುದು ಗಮನಕ್ಕೆ ಬಂದ ತಕ್ಷಣ ಇಲಾಖೆಯವತಿಯಿಂದ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುತ್ತಿದೆ.<br><br>ಪ್ರಸಕ್ತ ಸಾಲಿನಲ್ಲಿ ಯೂರಿಯಾ ರಸಗೊಬ್ಬರವನ್ನು ಎಮ್.ಆರ್.ಪಿ ದರಕ್ಕಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿರುವ ಸಂಬಂಧ ಶ್ರೀ ಬಾಲಾಜಿ ಟ್ರೇಡರ್ಸ್ ಮುಧೋಳ, ಸೇಡಂ ತಾಲ್ಲೂಕು, ಕಲಬುರಗಿ ಜಿಲ್ಲೆರವರ ವಿರುದ್ಧ ರಸಗೊಬ್ಬರ (ನಿಯಂತ್ರಣ) ಆದೇಶ,1985ರ Clause 3(3) ಉಲ್ಲಂಘನೆಗೆ ಸಂಬಂಧಿಸಿದಂತೆ, ಮುಧೋಳ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ದಾಖಲಿಸಲಾಗಿದೆ (ಎಫ್.ಐ.ಆರ್ ಸಂಖ್ಯೆ- 0093/2023).</td></tr>
<tr><td>ಈ)</td><td>ರಸಗೊಬ್ಬರ ಕಳ್ಳಸಾಗಣಿಕೆ ಹಾಗೂ ಕಾಳಸಂತೆಯಲ್ಲಿ ಮಾರಾಟ ತಡೆಗೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡು, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಳ್ಳುವ ಮೂಲಕ ರೈತರ ಹಿತರಕ್ಷಣೆಗೆ ಸರ್ಕಾರ ಈ ಕೂಡಲೇ ಮುಂದಾಗುವುದೇ?</td><td>ರಾಜ್ಯದಲ್ಲಿ ರಸಗೊಬ್ಬರ (ನಿಯಂತ್ರಣ) ಆದೇಶ, 1985 ಮತ್ತು ಅಗತ್ಯ ವಸ್ತುಗಳ ಕಾಯ್ದೆ, 1955ರ ಉಲ್ಲಂಘನೆಗಳಿಗೆ ಸಂಬಂಧಿಸಿದಂತೆ ತಪ್ಪಿತಸ್ಥರ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತಿದೆ.</td></tr>
</table>

**ಸಂಖ್ಯೆ: AGRI/241/ACT/2023**

**(ಎನ್. ಚಲುವರಾಯಸ್ವಾಮಿ)**
**ಕೃಷಿ ಸಚಿವರು**